**All India Radio: Bangalore**
**National Bulletin In Kannada**
**26.01.2026 07.35 a.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

- ಇಂದು ದೇಶಾದ್ಯಂತ ೭೭ನೇ ಗಣರಾಜ್ಯೋತ್ಸವ ಸಂಭ್ರಮ; ದೆಹಲಿಯ ಕರ್ತವ್ಯ ಪಥದಲ್ಲಿ ರಾಷ್ಟ್ರವನ್ನು ಮುನ್ನಡೆಸಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು
- ಗಣತಂತ್ರ ಹಬ್ಬದ ವಿಶೇಷ ಅತಿಥಿಗಳಾಗಿ ಐರೋಪ್ಯ ಒಕ್ಕೂಟದ ನಾಯಕರು ಭಾಗಿ; ದೇಶದ ಸೇನಾ ಶಕ್ತಿ ಅನಾವರಣ
- ದೇಶದ ಆರ್ಥಿಕ ಭವಿಷ್ಯ ರೂಪಿಸುವ ಪಯಣದಲ್ಲಿ 'ಸ್ವಾವಲಂಬನೆ - ಸ್ವದೇಶಿ' ಮಾರ್ಗದರ್ಶಿ ತತ್ವಗಳಾಗಿವೆ - ರಾಷ್ಟ್ರಪತಿ ದ್ರೌಪದಿ ಮುರ್ಮು
- ೨೦೨೬ನೇ ಸಾಲಿನ ೧೩೧ ಪದ್ಮ ಪ್ರಶಸ್ತಿಗಳು ಪ್ರಕಟ; ಅನನ್ಯ ಸೇವೆ ಸಲ್ಲಿಸಿದವರಿಗೆ ೫ ಪದ್ಮವಿಭೂಷಣ, ೧೩ ಪದ್ಮಭೂಷಣ ಹಾಗೂ ೧೧೩ ಪದ್ಮಶ್ರೀ ಪ್ರಶಸ್ತಿಗಳ ಘೋಷಣೆ
- ಭಾರತ - ನ್ಯೂಜಿಲೆಂಡ್ ಮೂರನೇ ಟಿ-೨೦ ಕ್ರಿಕೆಟ್ ಪಂದ್ಯ; ಸೂರ್ಯಕುಮಾರ್ ಬಳಗಕ್ಕೆ ೮ ವಿಕೆಟ್ ವಿಜಯ

<><><><>

ದೇಶದಾದ್ಯಂತ ಇಂದು ೭೭ ನೇ ಗಣರಾಜ್ಯೋತ್ಸವವನ್ನು ಆಚರಿಸಲಾಗುತ್ತಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ನವದೆಹಲಿಯ ಕರ್ತವ್ಯ ಪಥದಲ್ಲಿ ನಡೆಯಲಿರುವ ಪ್ರಧಾನ ಕಾರ್ಯಕ್ರಮದಲ್ಲಿ ರಾಷ್ಟ್ರವನ್ನು ಮುನ್ನಡೆಸಲಿದ್ದಾರೆ. ಗಣರಾಜ್ಯೋತ್ಸವದ ಮೆರವಣಿಗೆ ಬೆಳಗ್ಗೆ ೧೦:೩೦ ಕ್ಕೆ ಪ್ರಾರಂಭವಾಗಲಿದ್ದು, ಸುಮಾರು ೯೦ ನಿಮಿಷಗಳ ಕಾಲ ನಡೆಯುತ್ತದೆ. ಕರ್ತವ್ಯ ಪಥದಲ್ಲಿ ಗಣರಾಜ್ಯೋತ್ಸವ ಪರೇಡ್ ಭಾರತದ ಸಾಂಸ್ಕೃತಿಕ ವೈವಿಧ್ಯತೆ ಮತ್ತು ಮಿಲಿಟರಿ ಪರಾಕ್ರಮದ ವಿಶಿಷ್ಟ ಮಿಶ್ರಣವಾಗಿದೆ. ಈ ವರ್ಷದ ಧ್ಯೇಯವಾಕ್ಯ 'ಸ್ವತಂತ್ರ ಕಾ ಮಂತ್ರ: ವಂದೇ ಮಾತರಂ' ಮತ್ತು 'ಸಮೃದ್ಧಿಯ ಮಂತ್ರ: ಆತ್ಮನಿರ್ಭರ ಭಾರತ' ಎಂಬುದಾಗಿದೆ. ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರೀಯ ಯುದ್ಧ ಸ್ಮಾರಕದಲ್ಲಿ ಪುಷ್ಪಗುಚ್ಛ ಅರ್ಪಿಸುವ ಮೂಲಕ ದಿನದ ಕಾರ್ಯಕ್ರಮವನ್ನು ಆರಂಭಿಸಲಿದ್ದಾರೆ. ಸಶಸ್ತ್ರ ಪಡೆಗಳು, ಅರೆ ಮಿಲಿಟರಿ ಪಡೆಗಳು, ಸಹಾಯಕ ನಾಗರಿಕ ಪಡೆಗಳು, ಎನ್ ಸಿಸಿ ಮತ್ತು ಎನ್‌ಎಸ್‌ಎಸ್ ನ ಘಟಕಗಳನ್ನು ಒಳಗೊಂಡಿರುವ ಔಪಚಾರಿಕ ಪಥಸಂಚಲನದಲ್ಲಿ ಗೌರವ ವಂದನೆ ಸ್ವೀಕರಿಸುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕರ್ತವ್ಯ ಪಥಕ್ಕೆ ಆಗಮಿಸಲಿದ್ದಾರೆ. ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಕೋಸ್ಟಾ ಮತ್ತು ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೆಯೆನ್ ಅವರು ಮೆರವಣಿಗೆಯಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಪರೇಡ್ ಸಮಯದಲ್ಲಿ ವಿವಿಧ ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳು ಮತ್ತು ಕೇಂದ್ರ ಸರ್ಕಾರದ ಸಚಿವಾಲಯಗಳು ಮತ್ತು ಇಲಾಖೆಗಳ ಮೂವತ್ತು ಸ್ತಬ್ಧಚಿತ್ರಗಳನ್ನು ಪ್ರದರ್ಶಿಸಲಾಗುವುದು. ಈ ಸ್ತಬ್ಧಚಿತ್ರಗಳು ೧೫೦ ವರ್ಷಗಳ ರಾಷ್ಟ್ರೀಯ ಗೀತೆ ವಂದೇ ಮಾತರಂ ಮತ್ತು ಕ್ಷೇತ್ರಗಳಲ್ಲಿ ಬೆಳೆಯುತ್ತಿರುವ ಸ್ವಾವಲಂಬನೆಯ ಹಿನ್ನೆಲೆಯಲ್ಲಿ ರಾಷ್ಟ್ರದ ತ್ವರಿತ ಪ್ರಗತಿಯ ವಿಶಿಷ್ಟ ಮಿಶ್ರಣವನ್ನು ಪ್ರದರ್ಶಿಸುತ್ತಿವೆ. ಮೂರೂ ಸೇವೆಗಳ ಸ್ತಬ್ಧಚಿತ್ರವು ಭಾರತೀಯ ಸೇನೆ, ಭಾರತೀಯ ನೌಕಾಪಡೆ ಮತ್ತು ಭಾರತೀಯ ವಾಯುಪಡೆಯ ಸಾಮೂಹಿಕ ಶಕ್ತಿ, ಏಕತೆ ಮತ್ತು ಏಕೀಕರಣವನ್ನು ಪ್ರತಿನಿಧಿಸುವ 'ಆಪರೇಷನ್ ಸಿಂಧೂರ ಕುರಿತು ಚಿತ್ರಗಳನ್ನು ಪ್ರದರ್ಶಿಸಲಾಗುತ್ತದೆ. ಸೇನೆಯ ಹದಿನೆಂಟು ಪಥಸಂಚಲನ ತುಕಡಿಗಳು ಮತ್ತು ೧೩ ಬ್ಯಾಂಡ್ ಗಳು ಸಹ ಪರೇಡ್ ನಲ್ಲಿ ಭಾಗವಹಿಸಲಿವೆ. ಸೇನೆಯು ಮೊದಲ ಬಾರಿಗೆ ಬ್ಯಾಟಲ್ ಅರೇ ಸ್ವರೂಪವನ್ನು ಸಹ ಪ್ರದರ್ಶಿಸಲಿದೆ. ರಫೇಲ್, ಎಸ್ಯು-೩೦, ಸಿ-೨೯೫, ಮಿಗ್-೨೯, ಅಪಾಚೆ ಸೇರಿದಂತೆ ೨೯ ವಿಮಾನಗಳ ಹರಾಟದೊಂದಿಗೆ ಕಾರ್ಯಕ್ರಮ ಮುಕ್ತಾಯಗೊಳ್ಳಲಿದೆ. ರಾಷ್ಟ್ರ ಮತ್ತು ಸಮಾಜ ನಿರ್ಮಾಣದಲ್ಲಿ ಅವರ ಕೊಡುಗೆಗಳನ್ನು ಗೌರವಿಸಲು, ೨ ಸಾವಿರದ ೫೦೦ ಕಲಾವಿದರು ಸಾಂಸ್ಕೃತಿಕ ಪ್ರದರ್ಶನಗಳನ್ನು ಪ್ರಸ್ತುತಪಡಿಸಲಿದ್ದಾರೆ. ಈ ಕಾರ್ಯಕ್ರಮವನ್ನು ವೀಕ್ಷಿಸಲು ವಿವಿಧ ಕ್ಷೇತ್ರಗಳ ವಿಶೇಷ ಅತಿಥಿಗಳನ್ನು ಸರ್ಕಾರದ ವಿಶೇಷ ಅತಿಥಿಗಳಾಗಿ ಆಹ್ವಾನಿಸಲಾಗಿದೆ. ಆದಾಯ ಮತ್ತು ಉದ್ಯೋಗ ಸೃಷ್ಟಿ, ತಂತ್ರಜ್ಞಾನ, ನಾವಿನ್ಯತೆ, ನವೋದ್ಯಮಗಳು ಮತ್ತು ಸ್ವಸಹಾಯ ಗುಂಪುಗಳಿಗೆ ಸಂಬಂಧಿಸಿದಂತೆ ಅನುಕರಣೀಯ ಕೆಲಸ ಮಾಡಿದ ಜನರು ಸೇರಿದಂತೆ ೫೩ ವಿಭಾಗಗಳಲ್ಲಿ ೧೦ ಸಾವಿರ ವಿಶೇಷ ಅತಿಥಿಗಳು ಪಾಲ್ಗೊಳ್ಳಲಿದ್ದಾರೆ.

<><><><>

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ನಿನ್ನೆ ನವದೆಹಲಿಯಲ್ಲಿ ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಲೂಯಿಸ್ ಸ್ಯಾಂಟೋಸ್ ಡಾ ಕೋಸ್ಟಾ ಮತ್ತು ಯುರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೆಯೆನ್ ಅವರನ್ನು ಭೇಟಿ ಮಾಡಿದರು. ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಉಭಯ ನಾಯಕರ ಮುಂಬರುವ ಮಾತುಕತೆಗಳು ಭಾರತ-ಯುರೋಪಿಯನ್ ಯೂನಿಯನ್ ಸಂಬಂಧಗಳಲ್ಲಿ ಹೊಸ ಅಧ್ಯಾಯವನ್ನು ಸೃಷ್ಟಿಸುತ್ತವೆ ಎಂದು ಡಾ.ಜೈಶಂಕರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಭಾರತಕ್ಕೆ ಅಧಿಕೃತ ಭೇಟಿಗಾಗಿ ನಿನ್ನೆ ನವದೆಹಲಿಗೆ ಆಗಮಿಸಿದ ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಕೋಸ್ಟಾ ಅವರಿಗೆ ಆತ್ಮೀಯ ಸ್ವಾಗತ ನೀಡಲಾಯಿತು. ಅವರನ್ನು ವಾಣಿಜ್ಯ ಮತ್ತು ಕೈಗಾರಿಕೆ ಮತ್ತು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಜಿತಿನ್ ಪ್ರಸಾದ್ ಸ್ವಾಗತಿಸಿದರು. ಡಾ.ಜೈಶಂಕರ್, ಯುರೋಪಿಯನ್ ಕಮಿಷನ್ ನ ಉಪಾಧ್ಯಕ್ಷ ಕಜ್ಜಾ ಕಲ್ಲಾಸ್ ಅವರೊಂದಿಗೆ ಫಲಪ್ರದ ಮಾತುಕತೆ ನಡೆಸಿದರು. ಸಭೆಯಲ್ಲಿ ಉಭಯ ನಾಯಕರು ತಮ್ಮ ವಿನಿಮಯವನ್ನು ತೀವ್ರಗೊಳಿಸಲು ಮತ್ತು ಸಹಕಾರಿ ಕಾರ್ಯಸೂಚಿಯನ್ನು ಮುಂದಕ್ಕೆ ಕೊಂಡೊಯ್ಯಲು ಸಮ್ಮತಿಸಲಾಯಿತು ಎಂದು ಡಾ.ಜೈಶಂಕರ್ ಹೇಳಿದ್ದಾರೆ.

<><><><>

ದೇಶದ ಆರ್ಥಿಕ ಭವಿಷ್ಯವನ್ನು ರೂಪಿಸುವ ಪಯಣದಲ್ಲಿ ಸ್ವಾವಲಂಬನೆ ಮತ್ತು ಸ್ವದೇಶಿ ಮಾರ್ಗದರ್ಶಿ ತತ್ವಗಳಾಗಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ. ೭೭ನೇ ಗಣರಾಜ್ಯೋತ್ಸವದ ಮುನ್ನಾದಿನವಾದ ನಿನ್ನೆ ರಾಷ್ಟ್ರವನ್ನುದ್ದೇಶಿಸಿ ಮಾಡಿದ ಭಾಷಣದಲ್ಲಿ, ಭಾರತದ ಯುವ ಉದ್ಯಮಿಗಳು, ಕ್ರೀಡಾಪಟುಗಳು, ವಿಜ್ಞಾನಿಗಳು ಮತ್ತು ವೃತ್ತಿಪರರು ದೇಶಕ್ಕೆ ಚೈತನ್ಯ ತುಂಬುತ್ತಾ ಜಾಗತಿಕವಾಗಿ ತಮ್ಮ ಛಾಪು ಮೂಡಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಜಾಗತಿಕ ಅನಿಶ್ಚಿತತೆಗಳ ಹೊರತಾಗಿಯೂ, ದೇಶ ನಿರಂತರ ಆರ್ಥಿಕ ಬೆಳವಣಿಗೆಯನ್ನು ದಾಖಲಿಸುತ್ತಿದೆ ಎಂದು ಹೇಳಿದ ಅವರು, ಮುಂದಿನ ದಿನಗಳಲ್ಲಿ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗುವ ಗುರಿಯನ್ನು ಸಾಧಿಸುವತ್ತ ದೇಶ ಸಾಗುತ್ತಿದೆ ಎಂದರು. ಜಿಎಸ್‌ಟಿ ಸುಧಾರಣೆ, ಕಾರ್ಮಿಕ ಸುಧಾರಣೆಗಳು ಉದ್ಯಮಗಳ ಅಭಿವೃದ್ಧಿಗೆ ವೇಗ ನೀಡಿವೆ. 'ರಾಷ್ಟ್ರ ಮೊದಲು' ಎಂಬ ಮನೋಭಾವದೊಂದಿಗೆ ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು ಎಂದು ಕರೆ ನೀಡಿದ್ದಾರೆ. ಸಂವಿಧಾನದಲ್ಲಿ ಪ್ರತಿಪಾದಿಸಲಾದ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಆದರ್ಶಗಳು ದೇಶದ ಗಣರಾಜ್ಯವನ್ನು ವ್ಯಾಖ್ಯಾನಿಸುತ್ತವೆ ಎಂದು ಅವರು ವಿವರಿಸಿದರು. ದೇಶದಲ್ಲಿ ಸ್ಟಾರ್ಟ್-ಅಪ್‌ಗಳ ಯಶಸ್ಸು ಭಾರತದ ಯುವ ಉದ್ಯಮಿಗಳ ಮೇಲೆ ಅವಲಂಬಿತವಾಗಿದೆ. ಯುವ ಪೀಳಿಗೆಯ ಆಕಾಂಕ್ಷೆಗಳ ಮೇಲೆ ಕೇಂದ್ರೀಕರಿಸಿದ ನೀತಿಗಳು ಮತ್ತು ಕಾರ್ಯಕ್ರಮಗಳ ಮೂಲಕ ದೇಶದ ಅಭಿವೃದ್ಧಿ ವೇಗವನ್ನು ಪಡೆಯುತ್ತದೆ ಎಂದು ಅವರು ತಿಳಿಸಿದರು.

<><><><>

ಕೇಂದ್ರ ಸರ್ಕಾರ ನಿನ್ನೆ ೨೦೨೬ ನೇ ಸಾಲಿಗೆ ೧೩೧ ಪದ್ಮ ಪ್ರಶಸ್ತಿಗಳನ್ನು ಘೋಷಿಸಿದೆ. ಪ್ರಶಸ್ತಿಗಳಲ್ಲಿ ೫ ಪದ್ಮವಿಭೂಷಣ, ೧೩ ಪದ್ಮಭೂಷಣ ಮತ್ತು ೧೧೩ ಪದ್ಮಶ್ರೀ ಪ್ರಶಸ್ತಿಗಳು ಸೇರಿವೆ. ಪ್ರಶಸ್ತಿ ಪುರಸ್ಕೃತರಲ್ಲಿ ೧೯ ಮಹಿಳೆಯರು ಇದ್ದಾರೆ ಮತ್ತು ೧೬ ಮಂದಿಗೆ ಮರಣೋತ್ತರ ಗೌರವಗಳನ್ನು ನೀಡಲಾಗುತ್ತಿದೆ. ನಟರಾದ ಧರ್ಮೇಂದ್ರ ಮತ್ತು ಮಮ್ಮುಟ್ಟಿ, ರಾಜಕಾರಣಿಗಳಾದ ಕೆ.ಟಿ.ಥಾಮಸ್ ಮತ್ತು ವಿ.ಎಸ್.ಅಚ್ಯುತಾನಂದನ್, ಗಾಯಕಿ ಅಲ್ಕಾ ಯಾಗ್ನಿಕ್ ಮತ್ತು ಕ್ರಿಕೆಟಿಗ ರೋಹಿತ್ ಶರ್ಮಾ ಅವರಲ್ಲಿ ಪ್ರಮುಖರಾಗಿದ್ದಾರೆ. ಅಸಾಧಾರಣ ಕೊಡುಗೆಗಳನ್ನು ನೀಡುವ ಸಾಮಾನ್ಯ ಭಾರತೀಯರನ್ನು ಗುರುತಿಸುವ ಸಂಪ್ರದಾಯವನ್ನು ಮುಂದುವರಿಸುತ್ತಾ, ಈ ವರ್ಷದ ಪದ್ಮ ಪ್ರಶಸ್ತಿಗಳು ದೇಶಾದ್ಯಂತದ ಎಲೆಮರೆಯ ಕಾಯಿಯಂತಹ ನಾಯಕರನ್ನು ಗುರುತಿಸುತ್ತವೆ. ಭಾರತದ ಅತ್ಯುನ್ನತ ನಾಗರಿಕ ಗೌರವಗಳಲ್ಲಿಒಂದಾದ ಪದ್ಮ ಪ್ರಶಸ್ತಿಗಳನ್ನು ಪ್ರತಿ ವರ್ಷ ಗಣರಾಜ್ಯೋತ್ಸವದ ಮುನ್ನಾದಿನದಂದು ಘೋಷಿಸಲಾಗುತ್ತದೆ. ದಿವಂಗತ ಬಾಲಿವುಡ್ ನಟ ಧರ್ಮೇಂದ್ರ ಸಿಂಗ್ ಡಿಯೋಲ್ ಅವರಿಗೆ ಮರಣೋತ್ತರವಾಗಿ ಪದ್ಮವಿಭೂಷಣ ಪ್ರಶಸ್ತಿ ನೀಡಲಾಗಿದೆ. ಸಾರ್ವಜನಿಕ ವ್ಯವಹಾರಗಳಲ್ಲಿ ಕೇರಳದ ಕೆ.ಟಿ.ಥಾಮಸ್, ಕಲೆಯಲ್ಲಿ ಉತ್ತರ ಪ್ರದೇಶದ ಎನ್.ರಾಜಮ್ ಮತ್ತು ಸಾಹಿತ್ಯದಲ್ಲಿ ಕೇರಳದ ಪಿ.ನಾರಾಯಣನ್ ಅವರಿಗೆ ಎರಡನೇ ಅತ್ಯುನ್ನತ ನಾಗರಿಕ ಗೌರವ ನೀಡಲಾಗಿದೆ. ಕೇರಳದ ಮಾಜಿ ಮುಖ್ಯಮಂತ್ರಿ ವಿ.ಎಸ್.ಅಚ್ಯುತಾನಂದನ್ ಅವರಿಗೆ ಮರಣೋತ್ತರವಾಗಿ ಪದ್ಮವಿಭೂಷಣ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಹಿನ್ನೆಲೆ ಗಾಯಕಿ ಅಲ್ಕಾ ಯಾಗ್ನಿಕ್, ಉತ್ತರಾಖಂಡದ ಮಾಜಿ ಮುಖ್ಯಮಂತ್ರಿ ಭಗತ್ ಸಿಂಗ್ ಕೋಶ್ಯಾರಿ, ತಮಿಳುನಾಡಿನ ಕಲ್ಲಿಪಟ್ಟಿ ರಾಮಸ್ವಾಮಿ ಪಳನಿಸ್ವಾಮಿ ಮತ್ತು ಕೇರಳದ ಮಲಯಾಳಂ ನಟ ಮಮ್ಮುಟ್ಟಿ ಪದ್ಮಭೂಷಣ ಪ್ರಶಸ್ತಿ ಪುರಸ್ಕೃತರ ಪಟ್ಟಿಯಲ್ಲಿ ಸೇರಿದ್ದಾರೆ.

ತಮಿಳುನಾಡಿನ ನೋರಿ ದತ್ತಾತ್ರೇಯುಡು, ವಿಜಯ್ ಅಮೃತರಾಜ್, ಎಸ್.ಕೆ.ಎಂ.ಮೈಲಾನಂದನ್, ಶತಾವಧಾನಿ ಆರ್.ಗಣೇಶ್, ಬ್ಯಾಂಕರ್ ಉದಯ್ ಕೋಟಕ್, ವೆಲ್ಲಪಲ್ಲಿ ನಟೇಶನ್ ಈ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಪಿಯೂಷ್ ಪಾಂಡೆ, ವಿ.ಕೆ.ಮಲ್ಹೋತ್ರಾ ಮತ್ತು ಶಿಬು ಸೊರೆನ್ ಅವರಿಗೆ ಮರಣೋತ್ತರವಾಗಿ ಪದ್ಮಭೂಷಣ ಪ್ರಶಸ್ತಿ ನೀಡಲಾಗಿದೆ. ಕಲೆ, ಸಮಾಜ ಸೇವೆ, ಸಾರ್ವಜನಿಕ ವ್ಯವಹಾರಗಳು, ವೈದ್ಯಕೀಯ, ಕೃಷಿ, ಸಾಹಿತ್ಯ, ಶಿಕ್ಷಣ ಮತ್ತು ಕ್ರೀಡೆಯಂತಹ ಕ್ಷೇತ್ರಗಳಲ್ಲಿ ವಿಶಿಷ್ಟ ಸೇವೆಗಾಗಿ ನಾಲ್ಕನೇ ಅತ್ಯುನ್ನತ ನಾಗರಿಕ ಗೌರವವಾದ ಪದ್ಮಶ್ರೀ ಪ್ರಶಸ್ತಿಗೆ ೧೧೩ ವ್ಯಕ್ತಿಗಳನ್ನು ಹೆಸರಿಸಲಾಗಿದೆ. ಭಾರತದ ಸ್ಟಾರ್ ಕ್ರಿಕೆಟಿಗ ರೋಹಿತ್ ಶರ್ಮಾ, ಅಥ್ಲೀಟ್ ಪ್ರವೀಣ್ ಕುಮಾರ್, ಭಾರತ ಮಹಿಳಾ ಕ್ರಿಕೆಟ್ ತಂಡದ ನಾಯಕಿ ಹರ್ಮನ್ ಪ್ರೀತ್ ಕೌರ್, ಬಲದೇವ್ ಸಿಂಗ್, ಕೆ.ಪಜಾನಿವೇಲ್, ಸವಿತಾ ಪೂನಿಯಾ ಅವರಿಗೆ ಪದ್ಮಶ್ರೀ ಪ್ರಶಸ್ತಿ ನೀಡಲಾಗಿದೆ. ಕರ್ನಾಟಕದ ಶತಾವಧಾನಿ ಆರ್.ಗಣೇಶ್ ಅವರು ಪದ್ಮಭೂಷಣ ಪ್ರಶಸ್ತಿಗೆ ಭಾಜನರಾಗಿದ್ದಾರೆ. ವ್ಯಾಪಾರ ಮತ್ತು ಕೈಗಾರಿಕಾ ಕ್ಷೇತ್ರದಲ್ಲಿ ರಾಜ್ಯದ ಟಿ.ಟಿ.ಜಗನ್ನಾಥ್ ಅವರಿಗೆ ಮರಣೋತ್ತರವಾಗಿ ಪದ್ಮಶ್ರೀ ಪ್ರಶಸ್ತಿ ಪ್ರಕಟಿಸಲಾಗಿದೆ.

ಸಾಮಾಜಿಕ ಕಾರ್ಯಕರ್ತರ ವಿಭಾಗದಲ್ಲಿ ಪುಸ್ತಕ ಸಂಗ್ರಹಕಾರರು ಮತ್ತು ಗ್ರಂಥಪಾಲಕರಾದ ಅಂಕೇಗೌಡ ಎಂ ಮತ್ತು ಸಮಾಜ ಸೇವಕರಾದ ಎಸ್.ಜಿ.ಸುಶೀಲಮ್ಮ ಪದ್ಮಶ್ರೀ ಪ್ರಶಸ್ತಿಗೆ ಭಾಜನರಾಗಿದ್ದಾರೆ. ವೈದ್ಯಕೀಯ ಕ್ಷೇತ್ರದಲ್ಲಿ ಕುಸುಮರೋಗ ತಜ್ಞರಾದ ಸುರೇಶ್ ಹನಗವಾಡಿ, ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿಭಾಗದಲ್ಲಿ ಶುಭಾ ವೆಂಕಟೇಶ್ ಅಯ್ಯಂಗಾರ್, ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಪ್ರಭಾಕರ್ ಕೋರೆ ಅವರಿಗೆ ಪದ್ಮಶ್ರೀ ಪುರಸ್ಕಾರ ಸಂದಿದೆ.

<><><><>

ಗುವಾಹಟಿಯಲ್ಲಿ ಕಳೆದ ರಾತ್ರಿ ನಡೆದ ನ್ಯೂಜಿಲೆಂಡ್ ವಿರುದ್ಧದ ಮೂರನೇ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಭಾರತ ೮ ವಿಕೆಟ್‌ಗಳ ಭರ್ಜರಿ ಜಯ ಗಳಿಸಿದೆ. ಇದರೊಂದಿಗೆ ೫ ಪಂದ್ಯಗಳ ಸರಣಿಯನ್ನು ಎರಡು ಪಂದ್ಯಗಳು ಬಾಕಿ ಇರುವಂತೆಯೇ ೩-೦ ಅಂತರದಲ್ಲಿ ವಶಪಡಿಸಿಕೊಂಡಿದೆ. ನ್ಯೂಜಿಲೆಂಡ್ ನೀಡಿದ ೧೫೪ ರನ್‌ಗಳ ಗುರಿ ಬೆನ್ನಟ್ಟಿದ ಭಾರತ, ಕೇವಲ ೧೦ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೫೫ ರನ್‌ಗಳಿಸಿ ಸಂಭ್ರಮಿಸಿತು. ಭಾರತದ ಪರ ಅಭಿಷೇಕ್ ಶರ್ಮ ಮತ್ತು ಸೂರ್ಯಕುಮಾರ್ ಯಾದವ್ ಕ್ರಮವಾಗಿ ೬೮ ಮತ್ತು ೫೭ ರನ್ ಗಳಿಸಿ ಸುಲಭ ಗೆಲುವಿಗೆ ನೆರವಾದರು. ಇದಕ್ಕೂ ಮುನ್ನ ವೇಗಿ ಬುಮ್ರಾ ಸೇರಿದಂತೆ ಭಾರತೀಯರ ಸಂಘಟಿತ ದಾಳಿಗೆ ನ್ಯೂಜಿಲೆಂಡ್ ಸಾಧಾರಣ ಮೊತ್ತಕ್ಕೆ ಕುಸಿಯಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>